ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಚಿಕ್ಕಮಗಳೂರು ಜಾನಪದ ಜಾತ್ರೆ ಕಾರ್ಯಕ್ರಮಕ್ಕೆ ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ: ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಇಲಾಖಾ ಸಚಿವರ ಟಿಪ್ಪಣಿ ಸಂಖ್ಯೆ: ಪ್ರಕಸಂಸಸ/830/2020, ದಿ:2-01-2020.

********

ಪ್ರಸ್ತಾವನೆ:

ಚಿಕ್ಕಮಗಳೂರಿನಲ್ಲಿ ದಿನಾಂಕ:28-02-2020 ರಿಂದ 01-03-2020 ರವರೆಗೆ ಚಿಕ್ಕಮಗಳೂರು ಜಾನಪದ ಜಾತ್ರೆಯನ್ನು ಆಯೋಜಿಸಲಾಗಿದ್ದು, ಸದರಿ ಕಾರ್ಯಕ್ರಮವನ್ನು ಸನ್ಮಾನ್ಯ ಮುಖ್ಯಮಂತ್ರಿಗಳು ಉದ್ಘಾಟಿಸಲಿದ್ದಾರೆ. ಈ ಕಾರ್ಯಕ್ರಮದ ಆಯೋಜನೆಗಾಗಿ ಲೆಕ್ಕಶೀರ್ಷಿಕೆಯಡಿ ಲಭ್ಯವಿರುವ ರೂ.50.00 ಲಕ್ಷಗಳನ್ನು ಬಿಡುಗಡೆ ಮಾಡಿ ಆದೇಶ ಹೊರಡಿಸುವಂತೆ ಮಾನ್ಯ ಇಲಾಖಾ ಸಚಿವರು ಮೇಲೆ ಓದಲಾದ ಟಿಪ್ಪಣಿಯಲ್ಲಿ ಸೂಚ್ಯಾದೇಶ ನೀಡಿರುತ್ತಾರೆ.

ಮಾನ್ಯ ಇಲಾಖಾ ಸಚಿವರ ಅನುಮೋದನೆಯಂತೆ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕಸಂವಾ 88 ಕಸಧ 2020, ಬೆಂಗಳೂರು, ದಿನಾಂಕ:10-02-2020.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಚಿಕ್ಕಮಗಳೂರಿನಲ್ಲಿ ದಿನಾಂಕ:28-02-2020 ರಿಂದ 01-03-2020 ರವರೆಗೆ ನಡೆಯುವ ಚಿಕ್ಕಮಗಳೂರು ಜಾನಪದ ಜಾತ್ರೆ ಕಾರ್ಯಕ್ರಮಕ್ಕೆ ರೂ.50.00ಲಕ್ಷ(ರೂಪಾಯಿ ಐವತ್ತು ಲಕ್ಷಗಳು ಮಾತ್ರ)ಗಳನ್ನು ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು, ಇವರ ಮುಖಾಂತರ ಜಿಲ್ಲಾಧಿಕಾರಿಗಳು, ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು ಇವರಿಗೆ ಬಿಡುಗಡೆ ಮಾಡಲು ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಮಂಜೂರಾತಿ ನೀಡಿದೆ.

1. ಯಾವ ಉದ್ದೇಶಕ್ಕೆ ಅನುದಾನ ಬಿಡುಗಡೆ ಮಾಡಿದೆಯೋ ಅದೇ ಉದ್ದೇಶಕ್ಕೆ ಬಳಸತಕ್ಕದ್ದು.
2. ಬಿಡುಗಡೆ ಮಾಡಿರುವ ಅನುದಾನ ಸಮರ್ಪಕವಾಗಿ ಬಳಕೆಯಾದ ಬಗ್ಗೆ ಹಣ ಬಳಕೆ ಪ್ರಮಾಣಪತ್ರವನ್ನು ಒದಗಿಸುವುದು.
3. ಸಂಸ್ಥೆಯಿಂದ ಅಗತ್ಯ ದಾಖಲೆಗಳನ್ನು ಪಡೆದು ಧನಸಹಾಯ ಬಿಡುಗಡೆ ಮಾಡುವುದು.

2) ಈ ವೆಚ್ಚವನ್ನು 2019-20ನೇ ಸಾಲಿನ ಲೆಕ್ಕಶೀರ್ಷಿಕೆ 2205-00-102-4-01-103 ರಡಿಯಲ್ಲಿ ಭರಿಸತಕ್ಕದ್ದು.

3) ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 2020, ದಿನಾಂಕ:13-01-2020ಲ್ಲಿ ಇಲಾಖಾ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Malathi PS
10/2/20

(ಪಿ.ಎಸ್. ಮಾಲತಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ.
(ಸಂಸ್ಕೃತಿ)

ಗೆ:

1) ಮಹಾಲೇಖಪಾಲರು (ಎ&ಇ), (ಜಿ&ಎಸ್ ಎಸ್ ಎ), (ಇ & ಆರ್ ಎಸ್ ಎ), ಕರ್ನಾಟಕ ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2) ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಭವನ, ಬೆಂಗಳೂರು.
3) ಸಂಬಂಧಪಟ್ಟವರಿಗೆ (ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಮುಖಾಂತರ).
4) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರ ಆಪ್ತಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5) ಖಜಾನೆ ಅಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
6) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.